ಬಸವನಬಾಗೇವಾಡಿ ಕ್ಷೇತ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು

957 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರ ಬಸವನ ಬಾಗೇವಾಡಿಯ ಜನಸಂಖ್ಯೆಗೆ ಅನುಗುಣವಾಗಿದೆಯೇ?

ಇ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು? ಮತ್ತು ಈ ಹುದ್ದೆಗಳು ಯಾವ ಯಾವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇವೆ?

ಈ) ಸದರಿ ಹುದ್ದೆಗಳು ಎಂದಿನಿಂದ ಖಾಲಿ ಇವೆ?

ಉ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಡಾ॥ ಎ.ಬಿ. ಮಾಲಕ ರೆಡ್ಡಿ (ಆರೋಗ್ಯ ಮತ್ತು ಕುಟಂಬ ಕಲ್ಯಾಣ ಸಚಿವರು) :

ಅ) 14 (ಹದಿನಾಲ್ಕು)

ಆ) ಹೌದು.

ಇ) 2 (ಎರಡು)

1. ಪ್ರಾಥಮಿಕ ಆರೋಗ್ಯ ಕೇಂದ್ರ, ಗೊಳಸಂಗಿಯಲ್ಲಿ
2. ಪ್ರಾಥಮಿಕ ಆರೋಗ್ಯ ಕೇಂದ್ರ, ಸಾಸನೂರಿನಲ್ಲಿ

ಈ) ಪ್ರಾಥಮಿಕ ಆರೋಗ್ಯ ಕೇಂದ್ರ ಗೊಳಸಂಗಿಯಲ್ಲಿ ದಿನಾಂಕ 1.6.99ರಿಂದ ಮತ್ತು ಸಾಸನೂರಿನಲ್ಲಿ ಕಳೆದ 2 ವರ್ಷದಿಂದ ಖಾಲಿ ಇರುತ್ತದೆ.

ಉ) ಈಗ ನೇಮಕಾತಿ ಮಾಡಿಕೊಳ್ಳಲಾಗುತ್ತಿರುವ 573 ವೈದ್ಯರುಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಈಗಾಗಲೇ ಪ್ರಕಟಿಸಿದ್ದು, ಖಾಲಿ ಇರುವ ಹುದ್ದೆಗಳನ್ನು ಈ ನೇಮಕಾತಿಗೊಳ್ಳುತ್ತಿರುವ ವೈದ್ಯರುಗಳಿಂದ ಭರ್ತಿಮಾಡಿಕೊಳ್ಳುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಇರುವ ಸರ್ಕಾರಿ ಪ್ರೌಢಶಾಲೆಗಳು

958 - ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಇರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು?